ಕರ್ನಾಟಕ ವಿಧಾನಸಭೆ

KARNATAKA LEGISLATIVE ASSEMBLY

ಸೋಮವಾರ, ೫ನೇ ಸೆಪ್ಟೆಂಬರ್ ೧೯೯೪ ಸಾಯನ ಸೌರ ಭಾದ್ರಪದ (ಶಕ)

Monday, 5th September 1994 Sayana Sowra Bhadrapada (S.E.)

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೧ : ೨೦ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ವಿ. ಎಸ್. ಕೌಜಲಗಿ) ಅವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.

ಸಂತಾಪ ಸೂಚನೆ

ಅಧ್ಯಕ್ಷರು : ಶ್ರೀ ಸಿದ್ದಯ್ಯ ಪುರಾಣಿಕ ಅವರು ಇಂದು ಬೆಳಿಗ್ಗೆ ನಿಧನರಾದರೆಂದು ಸದನಕ್ಕೆ ತಿಳಿಸಲು ಅತೀವ ವಿಷಾದವೆನಿಸುತ್ತದೆ. ಶ್ರೀಯುತರು ಕರ್ನಾಟಕ ರಾಜ್ಯದಲ್ಲಿ ಐ.ಎ.ಎಸ್. ಅಧಿಕಾರಿಯಾಗಿ ಅನೇಕ ವರ್ಷಗಳ ಕಾಲ ಸೇವೆ ಸಲ್ಲಿಸಿರುತ್ತಾರೆ. ಅದಕ್ಕಿಂತಲೂ ಮಿಗಿಲಾಗಿ ಇವರು ಹೆಸರಾಂತ ಸಾಹಿತಿಗಳು ಕವಿಗಳೂ ಆಗಿದ್ದರು. ಹಾಗೂ ಕರ್ನಾಟಕ ಸರ್ಕಾರದಿಂದ ರಾಜ್ಯೋತ್ಸವ ಪ್ರಶಸ್ತಿಯನ್ನು ರಾಜ್ಯ ಸಾಹಿತ್ಯ ಅಕಾಡೆಮಿಯಿಂದ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನು ಪಡೆದಿರುತ್ತಾರೆ. ಅಲ್ಲದೆ ಭಾರತೀಯ ಭಾಷಾ ಪ್ರತಿಷ್ಠಾನದಿಂದ ಬಿಲ್ವರ ಪ್ರಶಸ್ತಿಯನ್ನು ಪಡೆದಿದ್ದರು. ಇವರ ಗೌರವಾರ್ಥ ಮಾನ್ಯ ಸದಸ್ಯರುಗಳು ಒಂದು ನಿಮಿಷ ಎದ್ದುನಿಂತು ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಸಭೆ ಎದ್ದುನಿಂತು ಮೃತರ ಗೌರವಾರ್ಥ ಒಂದು ನಿಮಿಷ ಮೌನವನ್ನಾಚರಿಸಿ ಶ್ರದ್ಧಾಂಜಲಿಯನ್ನರ್ಪಿಸಿತು.)

ಅಧ್ಯಕ್ಷರು : ಈ ಸಭೆ ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯವನ್ನು ಮೃತರ ಕುಟುಂಬ ವರ್ಗದವರಿಗೆ ಕಳುಹಿಸಿಕೊಡಲಾಗುವುದು.

ಪ್ರಶ್ನೋತ್ತರಗಳು

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು